Akashvani : Bangalore
National Bulletin In Kannada
12.11.2024 / 19.35 hrs
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

- ಜಾರ್ಖಂಡ್‌ನ ೪೩, ಕರ್ನಾಟಕದ ಮೂರು ವಿಧಾನಸಭಾ ಕ್ಷೇತ್ರಗಳಲ್ಲಿ ನಾಳೆ ಮತದಾನ
- ಮುಂಬರುವ ಮಹಾರಾಷ್ಟ್ರ ವಿಧಾನಸಭಾ ಚುನಾವಣೆಗೆ ರಾಜಕೀಯ ಪಕ್ಷಗಳಿಂದ ಅಬ್ಬರದ ಪ್ರಚಾರ
- ಉಜ್ಜೈನಿಯಲ್ಲಿಂದು ಉಪರಾಷ್ಟ್ರಪತಿಯವರಿಂದ ೬೬ನೇ ಅಖಿಲ ಕಾಳಿದಾಸ ಸಮಾರಂಭ ಉದ್ಘಾಟನೆ
- ಹಸಿರು ಜಲಜನಕ ಗುರಿಯತ್ತ ಭಾರತ ದಾಪುಗಾಲು - ಕೇಂದ್ರ ಸಚಿವ ಹರ್ದೀಪ್ ಸಿಂಗ್ ಪುರಿ
- ಮಾಸ್ಟರ್ಸ್ ಬ್ಯಾಡ್ಮಿಂಟನ್ ಪಂದ್ಯಾವಳಿ; ನಾಳೆ ಭಾರತದ ಪಿ.ವಿ.ಸಿಂಧು - ಲಕ್ಷ್ಯ ಸೇನ್ ಸ್ಪರ್ಧೆ

<><*<><>*><>

ನಾಳೆ ನಡೆಯಲಿರುವ ಜಾರ್ಖಂಡ್ ವಿಧಾನಸಭಾ ಚುನಾವಣೆಯ ಮೊದಲ ಹಂತದ ಮತದಾನಕ್ಕೆ ವ್ಯಾಪಕ ಸಿದ್ಧತೆ ಕೈಗೊಳ್ಳಲಾಗಿದೆ. ಈ ಹಂತದಲ್ಲಿ ೪೩ ಕ್ಷೇತ್ರಗಳಿಗೆ ಚುನಾವಣೆ ನಡೆಯಲಿದೆ. ಒಟ್ಟು ೧೫ ಸಾವಿರದ ೩೪೪ ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ. ಅತಿಸೂಕ್ಷ್ಮ ೨೨೫ ಮತಗಟ್ಟೆಗಳಲ್ಲಿ ಮತದಾನಕ್ಕೆ ಸಕಲ ವ್ಯವಸ್ಥೆ ಮಾಡಲಾಗಿದೆ. ಭಾರತೀಯ ವಾಯುಪಡೆ ಹೆಲಿಕಾಪ್ಟರ್‌ಗಳ ಮೂಲಕ ಚುನಾವಣಾ ಪರಿಕರಗಳನ್ನು ರವಾನಿಸಲಾಗಿದೆ. ಒಟ್ಟು ೬೮೩ ಅಭ್ಯರ್ಥಿಗಳು ಕಣದಲ್ಲಿದ್ದು, ಈ ಪೈಕಿ ೭೩ ಮಹಿಳಾ ಅಭ್ಯರ್ಥಿಗಳಾಗಿದ್ದಾರೆ. ಒಂದು ಕೋಟಿ ೩೭ ಲಕ್ಷ ಮತದಾರರು ಅಭ್ಯರ್ಥಿಗಳ ಭವಿಷ್ಯ ಬರೆಯಲಿದ್ದಾರೆ. ಉಳಿದ ೩೮ ಕ್ಷೇತ್ರಗಳಿಗೆ ಇದೇ ೨೦ರಂದು ಎರಡನೇ ಹಂತದಲ್ಲಿ ಮತದಾನವಾಗಲಿದ್ದು, ಎನ್‌ಡಿಎ ಹಾಗೂ ಐಎನ್‌ಡಿಐ ಮೈತ್ರಿಕೂಟದ ನಾಯಕರು ಮತದಾರರ ಮನವೊಲಿಸಲು ಕೈಗೊಳ್ಳಬೇಕಾದ ಕ್ರಮಗಳ ಕುರಿತು ಸಭೆ ನಡೆಸಿದರು. ಜಾರಿಯಾದ ಧಾನ್‌ಬಾದ್‌ನಲ್ಲಿ ಚುನಾವಣಾ ಸಭೆಯಲ್ಲಿ ಮಾತನಾಡಿದ ಬಿಜೆಪಿ ಹಿರಿಯ ನಾಯಕ ಹಾಗೂ ಕೇಂದ್ರ ಸಚಿವ ಅಮಿತ್ ಶಾ, ಪ್ರಸ್ತುತ ಇರುವ ಭ್ರಷ್ಟ ರಾಜ್ಯ ಸರ್ಕಾರವನ್ನು ತೆಗೆದು ಹಾಕಲು ಇದು ಸಕಾಲ ಎಂದು ಹೇಳಿದರು. ಸಿಂದ್ರಿಯಲ್ಲಿ ಚುನಾವಣಾ ಸಭೆಯಲ್ಲಿ ಜೆಎಂಎಂ ನಾಯಕ ಹಾಗೂ ಜಾರ್ಖಂಡ್ ಮುಖ್ಯಮಂತ್ರಿ ಹೇಮಂತ್ ಸೊರೆನ್ ಪಾಲ್ಗೊಂಡು ಪಕ್ಷದ ಅಭ್ಯರ್ಥಿ ಪರ ಮತಯಾಚಿಸಿದರು. ಉಳಿದಂತೆ ಕಾಂಗ್ರೆಸ್, ಆರ್‌ಜೆಡಿ, ಎಜೆಎಸ್‌ಯು ಹಾಗೂ ಎಡಪಕ್ಷಗಳೂ ಕೂಡ ರಾಜ್ಯದ ವಿವಿಧೆಡೆ ಚುನಾವಣಾ ರ್‍ಯಾಲಿಗಳನ್ನು ನಡೆಸಿ, ತಮ್ಮ ತಮ್ಮ ಅಭ್ಯರ್ಥಿಗಳ ಪರ ಮತಯಾಚನೆ ನಡೆಸಿದರು.

<><*<><>*><>

ಕರ್ನಾಟಕದ ಮೂರು ವಿಧಾನಸಭಾ ಕ್ಷೇತ್ರಗಳಾದ ರಾಮನಗರ ಜಿಲ್ಲೆಯ ಚನ್ನಪಟ್ಟಣ, ಬಳ್ಳಾರಿ ಜಿಲ್ಲೆಯ ಸಂಡೂರು ಹಾಗೂ ಹಾವೇರಿ ಜಿಲ್ಲೆಯ ಶಿಗ್ಗಾಂವಿ ಕ್ಷೇತ್ರಗಳಿಗೆ ನಾಳೆ ಉಪಚುನಾವಣೆ

ನಡೆಯಲಿದೆ. ಚನ್ನಪಟ್ಟಣದಲ್ಲಿ ಎನ್.ಡಿ.ಎ ಅಭ್ಯರ್ಥಿ, ಶಿಗ್ಗಾಂವಿ ಹಾಗೂ ಸಂಡೂರಿನಲ್ಲಿ ಬಿಜೆಪಿ ಅಭ್ಯರ್ಥಿಗಳು ಕಣದಲ್ಲಿದ್ದಾರೆ. ಈ ಮೂರು ಕ್ಷೇತ್ರಗಳಲ್ಲಿ ಕಾಂಗ್ರೆಸ್, ತನ್ನ ಅಭ್ಯರ್ಥಿಗಳನ್ನು ಕಣಕ್ಕಿಳಿಸಿದೆ. ನಾಳೆ ಮತದಾನ ನಡೆಯಲಿದ್ದು, ಇದೇ ೨೩ರಂದು ಫಲಿತಾಂಶ ಪ್ರಕಟವಾಗಲಿದೆ. ಮತದಾನಕ್ಕಾಗಿ ಮೂರೂ ಕ್ಷೇತ್ರಗಳಲ್ಲಿ ವ್ಯಾಪಕ ಭದ್ರತಾ ವ್ಯವಸ್ಥೆ ಮಾಡಲಾಗಿದ್ದು, ಇಂದು ಚುನಾವಣಾ ಸಿಬ್ಬಂದಿಯನ್ನು ಸಂಬಂಧಪಟ್ಟ ಬೂತ್ ಗಳಿಗೆ ನಿಯೋಜಿಸುವ ಮಸ್ಟರಿಂಗ್ ಪ್ರಕ್ರಿಯೆ ನಡೆಯಿತು. ಸಂಡೂರಿನಲ್ಲಿ ೨ ಲಕ್ಷ ೩೬ ಸಾವಿರದ ೧೦೦ ಮತದಾರರಿದ್ದು, ೨೫೩ ಮತಗಟ್ಟೆಗಳ ಪೈಕಿ ೧೨೭ ಬೂತ್‌ಗಳಲ್ಲಿ ವೆಬ್‌ಕ್ಯಾಸ್ಟಿಂಗ್ ನಡೆಯಲಿದೆ. ಶಿಗ್ಗಾಂವಿಯಲ್ಲಿ ೧೯೬ ಮತಗಟ್ಟೆಗಳಲ್ಲಿ ೨ ಲಕ್ಷ ೩೭ ಸಾವಿರದ ೬೬೯ ಮತದಾರರು ಮತದಾನ ಮಾಡಲಿದ್ದು, ೧೨೧ ಬೂತ್‌ಗಳಲ್ಲಿ ವೆಬ್‌ಕಾಸ್ಟಿಂಗ್ ನಡೆಯಲಿದೆ. ಚನ್ನಪಟ್ಟಣದಲ್ಲಿ ೨೭೬ ಮತಗಟ್ಟೆಗಳಲ್ಲಿ ೨ ಲಕ್ಷ ೩೨ ಸಾವಿರದ ೯೪೯ ನೋಂದಾಯಿತ ಮತದಾರರಿದ್ದು, ಎಲ್ಲಾ ೨೭೬ ಬೂತ್‌ಗಳಲ್ಲಿ ವೆಬ್‌ಕ್ಯಾಸ್ಟಿಂಗ್ ಮಾಡಲಾಗುವುದು. ವಿಧಾನಸಭಾ ಕ್ಷೇತ್ರಗಳ ಉಪ ಚುನಾವಣೆ ಹಿನ್ನೆಲೆಯಲ್ಲಿ ಮತದಾನದ ದಿನದಂದು ಆ ಭಾಗದ ಸರ್ಕಾರಿ ನೌಕರರು, ಶಾಲಾ-ಕಾಲೇಜುಗಳು ಹಾಗೂ ಖಾಸಗಿ ಕಂಪನಿಗಳಲ್ಲಿ ಕೆಲಸ ಮಾಡುವ ಮತದಾರರಿಗೆ ೧ ದಿನದ ವೇತನ ಸಹಿತ ರಜೆ ಘೋಷಿಸಿ ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ.

<><*<><>*><>

ಇದೇ ೨೦ ರಂದು ಒಂದೇ ಹಂತದಲ್ಲಿ ನಡೆಯಲಿರುವ ಮಹಾರಾಷ್ಟ್ರ ವಿಧಾನಸಭಾ ಚುನಾವಣೆಗೆ ವಿವಿಧ ರಾಜಕೀಯ ಪಕ್ಷಗಳ ಚುನಾವಣಾ ಕಾರ್ಯ ಬಿರುಸಿನಿಂದ ಸಾಗಿದೆ. ಚಂದ್ರಪುರ ಜಿಲ್ಲೆಯ ಚಿಮುರ್‌ನಲ್ಲಿಂದು ಚುನಾವಣಾ ರ್‍ಯಾಲಿಯನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, ರಾಜ್ಯದ ಮಹಾಯುತಿ ಸರ್ಕಾರ ತೀವ್ರಗತಿಯಲ್ಲಿ ಅಭಿವೃದ್ಧಿ ಕಾರ್ಯ ಕೈಗೊಂಡಿದೆ ಎಂದು ಶ್ಲಾಘಿಸಿದರು.  ಮಹಾಯುತಿ ಸರ್ಕಾರದ ಕ್ರಮಗಳಿಂದಾಗಿ, ಕಳೆದ ಎರಡು ವರ್ಷಗಳಲ್ಲಿ ಮಹಾರಾಷ್ಟ್ರ, ಅತಿ ಹೆಚ್ಚಿನ ವಿದೇಶಿ ನೇರ ಹೂಡಿಕೆಯನ್ನು ಕಂಡಿದೆ. ಈ ಬಾರಿಯ ಪ್ರಣಾಳಿಕೆಯಲ್ಲಿ ರಾಜ್ಯದ ಬೆಳವಣಿಗೆಗೆ ಹಲವಾರು ಉತ್ತಮ ಭರವಸೆಗಳನ್ನು ನೀಡಲಾಗಿದೆ ಎಂದು ಪ್ರಧಾನಿ ಹೇಳಿದರು. ಬಿಜೆಪಿ ಹಿರಿಯ ನಾಯಕ ಗೃಹ ಸಚಿವ ಅಮಿತ್ ಶಾ, ಇಂದು ಘಾಟ್‌ಕೋಪರ್‌ನಲ್ಲಿ ಸಾರ್ವಜನಿಕ ಸಭೆಯಲ್ಲಿ ಪಾಲ್ಗೊಂಡು ಮತಯಾಚಿಸಿದರು. ಹಾಗೆಯೇ ಕೇಂದ್ರ ಸಚಿವ ನಿತಿನ್ ಗಡ್ಕರಿ, ಲಾತೂರ್ ಜಿಲ್ಲೆಯ ದಿಯೋನಿಯಲ್ಲಿ ನಡೆದ ರ್‍ಯಾಲಿಯಲ್ಲಿ ಪಾಲ್ಗೊಂಡರು. ಬುಲ್ಡಾನ ಜಿಲ್ಲೆಯ ಚಿಖ್ಲಿಯಲ್ಲಿ ನಿಗದಿಯಾಗಿದ್ದ ಕಾಂಗ್ರೆಸ್ ಮುಖಂಡ ಹಾಗೂ ಲೋಕಸಭಾ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ ಅವರ ಚುನಾವಣಾ ರ್‍ಯಾಲಿ ಕಾರಣಾಂತರಗಳಿಂದ ರದ್ದುಗೊಂಡಿತು. ಎನ್‌ಸಿಪಿ-ಎಸ್‌ಪಿ ಯ ನಾಯಕಿ ಸುಪ್ರಿಯಾ ಸುಳೆ, ಮಹಾವಿಕಾಸ್ ಅಘಾಡಿ  ಮೈತ್ರಿಕೂಟದ ಅಭ್ಯರ್ಥಿಯ ಪರವಾಗಿ ಘಡ್ಚಿರೋಲಿಯ ಅಹೇರಿಯಲ್ಲಿ ಚುನಾವಣಾ ಪ್ರಚಾರ ನಡೆಸಿದರು. ಎನ್‌ಸಿಪಿ-ಎಸ್‌ಪಿ, ಶಿವಸೇನೆ-ಯುಬಿಟಿ, ಪಕ್ಷದ ನಾಯಕರು ಇಂದು ರಾಜ್ಯದ ವಿವಿಧೆಡೆ ಚುನಾವಣಾ ರ್‍ಯಾಲಿಗಳನ್ನು ನಡೆಸಿ ಮತಯಾಚಿಸಿದರು.

<><*<><>*><>

ಮಧ್ಯಪ್ರದೇಶದ ಉಜ್ಜಯಿನಿಯಲ್ಲಿ ಇಂದು ೬೬ನೇ ಅಖಿಲ ಭಾರತ ಕಾಳಿದಾಸ್ ಸಮಾರಂಭವನ್ನು ಉಪರಾಷ್ಟ್ರಪತಿ ಜಗದೀಪ್ ಧನಕರ್ ಉದ್ಘಾಟಿಸಿದರು. ಸಮಾರಂಭದಲ್ಲಿ ರಾಜ್ಯಪಾಲ ಮಂಗೂಭಾಯಿ ಪಟೇಲ್, ಮುಖ್ಯಮಂತ್ರಿ ಡಾ. ಮೋಹನ್ ಯಾದವ್, ಶ್ರೀರಾಮ ಜನ್ಮಭೂಮಿ ತೀರ್ಥ ಕ್ಷೇತ್ರದ ನ್ಯಾಸ ಅಯೋಧ್ಯೆಯ ಖಜಾಂಚಿ ಸ್ವಾಮಿ ಗೋವಿಂದದೇವ ಗಿರಿ ಮಹಾರಾಜ್

ಉಪಸ್ಥಿತರಿದ್ದರು. ಕಾರ್ಯಕ್ರಮದಲ್ಲಿ ೨೦೨೨-೨೩ನೇ ಸಾಲಿನ ಕಾಳಿದಾಸ್ ಅಲಂಕಾರ್ ಸಮ್ಮಾನ್ ಪ್ರದಾನ ಮಾಡಲಾಯಿತು. ನಾಲ್ಕು ಪ್ರಕಾರಗಳಲ್ಲಿ ಒಟ್ಟು ಎಂಟು ಮಂದಿ ವಿದ್ವಾಂಸರನ್ನು ಸನ್ಮಾನಿಸಲಾಯಿತು. ನವೆಂಬರ್ ೧೮ ರವರೆಗೆ ನಡೆಯಲಿರುವ ಈ ಸಮಾರಂಭದಲ್ಲಿ ಮಹಾಕವಿ ಕಾಳಿದಾಸರ ಕೃತಿಗಳು ಮತ್ತು ಇತರ ಹಲವು ವಿಷಯಗಳ ಕುರಿತು ಚರ್ಚೆಗಳು ನಡೆಯಲಿವೆ. ಇದರೊಂದಿಗೆ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ.

<><*<><>*><>

ಜೈವಿಕ ಇಂಧನ ಮಿಶ್ರಣದಿಂದ ಭಾರತಕ್ಕೆ ಆಮದು ವೆಚ್ಚದಲ್ಲಿ ೯೧ ಸಾವಿರ ಕೋಟಿ ರೂಪಾಯಿ ಕಡಿತಗೊಳಿಸಬಹುದಾಗಿದ್ದು, ಈ ಉಳಿತಾಯ ಕೃಷಿ ಕ್ಷೇತ್ರಕ್ಕೆ ಲಾಭದಾಯಕವಾಗಲಿದೆ ಎಂದು ಕೇಂದ್ರ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವ ಹರ್ದೀಪ್ ಸಿಂಗ್ ಪುರಿ ಹೇಳಿದ್ದಾರೆ. ಬೆಂಗಳೂರಿನಲ್ಲಿಂದು ೨೭ನೇ ಇಂಧನ ತಂತ್ರಜ್ಞಾನ ಶೃಂಗಸಭೆಯನ್ನು ಉದ್ಘಾಟಿಸಿ ಮಾತನಾಡಿದ ಅವರು, ಜೈವಿಕ ಇಂಧನ ಮಿಶ್ರಣದಲ್ಲಿ ಭಾರತ, ಜಾಗತಿಕವಾಗಿ ಎರಡನೇ ಸ್ಥಾನದಲ್ಲಿದೆ. ಮುಂದಿನ ವರ್ಷದ ವೇಳೆಗೆ ನಿಗದಿತ ಅವಧಿಗಿಂತ ಮುಂಚಿತವಾಗಿ ಶೇಕಡಾ ೨೦ ರಷ್ಟು ಜೈವಿಕ ಇಂಧನ ಮಿಶ್ರಣದ ಗುರಿಯನ್ನು ಸಾಧಿಸುವ ಹಾದಿಯಲ್ಲಿದೆ ಎಂದರು. ಭಾರತ, ಹಸಿರು ಜಲಜನಕದ ಗುರಿಯತ್ತ ಮುನ್ನಡೆಯುತ್ತಿದ್ದು, ಭಾರತೀಯ ಸಂಸ್ಕರಣಾಗಾರಗಳು ಹಸಿರು ಶಕ್ತಿಗೆ ಪರಿವರ್ತನೆಯಾಗುತ್ತಿದ್ದಂತೆ, ದೇಶವು ತನ್ನ ಹಸಿರು ಹೈಡ್ರೋಜನ್ ಗುರಿಗಳತ್ತ ಮುನ್ನಡೆಯುತ್ತಿದೆ. ೨೦೪೭ರ ವೇಳೆಗೆ ಭಾರತದ ಇಂಧನ ಬೇಡಿಕೆಯು ೨.೫ ಪಟ್ಟು ಹೆಚ್ಚುವ ನಿರೀಕ್ಷೆಯಿದೆ ಎಂದು ತಿಳಿಸಿದರು.  ಪ್ರಸ್ತುತ ಕಚ್ಚಾ ತೈಲ ಸಂಸ್ಕರಣಾ ಸಾಮರ್ಥ್ಯ, ವಾರ್ಷಿಕವಾಗಿ ೪೦೦ ರಿಂದ ೪೫೦ ಮಿಲಿಯನ್ ಮೆಟ್ರಿಕ್ ಟನ್‌ಗಳಷ್ಟಿದ್ದು, ಜಾಗತಿಕ ಸರಾಸರಿಯ ಮೂರನೇ ಒಂದು ಭಾಗದಷ್ಟಿದೆ ಎಂದರು.

ಧ್ವನಿ: ಹರ್ದೀಪ್ ಸಿಂಗ್ ಪುರಿ, ಕೇಂದ್ರ ಸಚಿವರು

ಸೆಂಟರ್ ಫಾರ್ ಹೈ ಟೆಕ್ನಾಲಜಿ ಮತ್ತು ಇಂಡಿಯನ್ ಆಯಿಲ್ ಕಾರ್ಪೊರೇಷನ್ ಲಿಮಿಟೆಡ್ ಆಯೋಜಿಸಿರುವ ಮೂರು ದಿನಗಳ ಈ ಶೃಂಗಸಭೆಯಲ್ಲಿ ಸಚಿವರು ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯದ ೨೦೨೩-೨೪ ರ ಅತ್ಯುತ್ತಮ ಇಂಧನ-ಸಮರ್ಥ ತಂತ್ರಜ್ಞಾನ ಪ್ರಶಸ್ತಿ ಪ್ರದಾನ ಮಾಡಿದರು.

<><*<><>*><>

೨೦೩೦ರ ಗಡುವಿನ ಮೊದಲೇ ಬಾರತ ಮತ್ತು ರಷ್ಯಾ ೧೦೦ ಬಿಲಿಯನ್ ಡಾಲರ್ ಮೌಲ್ಯದ ವ್ಯಾಪಾರ ವಹಿವಾಟು ಗುರಿಯನ್ನು ತಲುಪಲಿದೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವ ಡಾ. ಎಸ್. ಜೈಶಂಕರ್ ವಿಶ್ವಾಸ ವ್ಯಕ್ತಪಡಿಸಿದ್ದಾರೆ.  ವ್ಯಾಪಾರ, ಆರ್ಥಿಕತೆ, ವೈಜ್ಞಾನಿಕ, ತಾಂತ್ರಿಕ, ಸಾಂಸ್ಕೃತಿಕ ಸಹಕಾರದ ೨೫ನೇ ಭಾರತ-ರಷ್ಯಾ ಅಂತರ-ಸರ್ಕಾರಿ ಅಧಿವೇಶನದಲ್ಲಿ ಮಾತನಾಡಿದ ಅವರು, ರಷ್ಯಾ, ಭಾರತದ ಕಚ್ಚಾತೈಲ ಮತ್ತು ರಸಗೊಬ್ಬರಗಳ ಪ್ರಮುಖ ಮೂಲವಾಗಿದೆ. ಭಾರತದ ಔಷಧೀಯ ಉದ್ಯಮದ ರಫ್ತು ರಷ್ಯಾಕ್ಕೆ ಮೌಲ್ಯಯುತವಾಗಿದೆ ಎಂದರು. ವ್ಯಾಪಾರ ಕ್ಷೇತ್ರದಲ್ಲಿ ಅಡೆತಡೆಗಳ ಹೊರತಾಗಿಯೂ, ಎರಡೂ ದೇಶಗಳು ಅಂತಾರಾಷ್ಟ್ರೀಯ ಉತ್ತರ-ದಕ್ಷಿಣ ಸಾರಿಗೆ ಕಾರಿಡಾರ್, ಚೆನ್ನೈ-ವ್ಲಾಡಿವೋಸ್ಟಾಕ್ ಕಾರಿಡಾರ್ ಮತ್ತು ಉತ್ತರ ಸಮುದ್ರ ಮಾರ್ಗಗಳಿಗೆ ಸಂಬಂಧಿಸಿದಂತೆ ಜಂಟಿ ಪ್ರಯತ್ನಗಳನ್ನು ಮುಂದುವರಿಸಬೇಕು ಎಂದು ಅವರು ಒತ್ತಿ ಹೇಳಿದರು. ಬಾರತಕ್ಕೆ ಮೊದಲ ಬಾರಿ ಭೇಟಿ ನೀಡಿರುವ

ರಷ್ಯಾ ಉಪಪ್ರಧಾನಿ ಮಾಂಟುರೋವ್, ಕಳೆದ ಐದು ವರ್ಷಗಳಲ್ಲಿ, ಎರಡೂ ದೇಶಗಳ ನಡುವಿನ ವ್ಯಾಪಾರ ವಹಿವಾಟು ಐದು ಪಟ್ಟು ಹೆಚ್ಚು ಬೆಳೆದಿದ್ದು. ರಷ್ಯಾದ ಎಲ್ಲಾ ವಿದೇಶಿ ಆರ್ಥಿಕ ಪಾಲುದಾರರಲ್ಲಿ ಭಾರತವು ಈಗ ಎರಡನೇ ಸ್ಥಾನದಲ್ಲಿದೆ” ಎಂದರು.

<><*<><>*><>

ಜಪಾನಿನ ಕುಮಾಮೊಟೊದಲ್ಲಿ ನಡೆಯುತ್ತಿರುವ ೨೦೨೪ರ ಮಾಸ್ಟರ್ಸ್ ಬ್ಯಾಡ್ಮಿಂಟನ್ ಪಂದ್ಯಾವಳಿಯಲ್ಲಿ, ನಾಳೆ ನಡೆಯುವ ಪಂದ್ಯಗಳಲ್ಲಿ, ಭಾರತೀಯ ಆಟಗಾರರಾದ, ಎರಡು ಬಾರಿ ಒಲಿಂಪಿಕ್ ಪದಕ ವಿಜೇತೆ ಪಿ.ವಿ. ಸಿಂಧು ಹಾಗೂ ಲಕ್ಷ್ಯ ಸೇನ್ ತಮ್ಮ ಮೊದಲ ಸುತ್ತಿನಲ್ಲಿ ಕಣಕ್ಕಿಳಿಯಲಿದ್ದಾರೆ. ಇಂದು ನಡೆದ ತಮ್ಮ ಆರಂಭಿಕ ಪಂದ್ಯದಲ್ಲಿ ಭಾರತದ ಜೋಡಿ ತ್ರೀಸಾ ಜಾಲಿ ಮತ್ತು ಗಾಯತ್ರಿ ಗೋಪಿಚಂದ್ ಸೋಲನುಭವಿಸಿದ್ದಾರೆ. ಮಹಿಳೆಯರ ಡಬಲ್ಸ್ ಶ್ರೇಯಾಂಕದಲ್ಲಿ ೨೦ ನೇ ಸ್ಥಾನದಲ್ಲಿರುವ, ಕಾಮನ್‌ವೆಲ್ತ್ ಗೇಮ್ಸ್‌ನ ಕಂಚಿನ ಪದಕ ವಿಜೇತ ಬ್ಯಾಡ್ಮಿಂಟನ್ ಆಟಗಾರ್ತಿ ತ್ರೀಸಾ ಮತ್ತು ಗಾಯತ್ರಿ ಅವರು ೩೨ರ ಸುತ್ತಿನಲ್ಲಿ ೨೧-೧೬, ೨೧-೧೬ರ ಅಂತರದೊಂದಿಗೆ ಚೀನಾ ತೈಪೆಯ ವಿಶ್ವ ೨೯ನೇ ಕ್ರಮಾಂಕದ ಜೋಡಿ ಲಿನ್ ಝಿಹ್ ಯುನ್-ಹ್ಸು ಯಿನ್ ಹುಯಿ ವಿರುದ್ಧ ಸೋಲು ಕಂಡರು.

<><*<><>*><>

೨೦೨೪ರ ವಿಶ್ವ ಬಿಲಿಯರ್ಡ್ಸ್ ಚಾಂಪಿಯನ್ ಆಗಿದ್ದಕ್ಕಾಗಿ ಪಂಕಜ್ ಅಡ್ವಾಣಿ ಅವರನ್ನು ಪ್ರಧಾನಿ ನರೇಂದ್ರ ಮೋದಿ ಅಭಿನಂದಿಸಿದ್ದಾರೆ. ತಮ್ಮ ಸಂದೇಶದಲ್ಲಿ ಪ್ರಧಾನಿ, ಪಂಕಜ್ ಅವರ ಸಮರ್ಪಣೆ, ಉತ್ಸಾಹ ಮತ್ತು ಬದ್ಧತೆಯನ್ನು ಶ್ಲಾಘಿಸಿದ್ದು, ಅವರ ಯಶಸ್ಸು ಮುಂಬರುವ ಕ್ರೀಡಾಪಟುಗಳಿಗೆ ಸ್ಫೂರ್ತಿ ನೀಡಲಿದೆ ಎಂದು ತಿಳಿಸಿದ್ದಾರೆ.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ <>*><>